# ಜಿಲ್ಲಾಧಿಕಾರಿಗಳ ಕಾರ್ಯಾಲಯ, ಕೊಡಗು ಜಿಲ್ಲೆ, ಮಡಿಕೇರಿ.

ಕರ್ನಾಟಕ ಸರ್ಕಾರ

## 2022ನೇ ಸಾಲಿಗಾಗಿ

## ಗ್ರಾಮಲೆಕ್ಕಿಗರ ನೇರ ನೇಮಕಾತಿ ಆಯ್ಕೆ ಪ್ರಾಧಿಕಾರ

## ಜಿಲ್ಲಾಧಿಕಾರಿಗಳ ಕಛೇರಿ,

## ಜಿಲ್ಲಾ ಆಡಳಿತ ಭವನ, ಕೊಡಗು ಜಿಲ್ಲೆ, ಮಡಿಕೇರಿ.

*****

## ಗ್ರಾಮಲೆಕ್ಕಿಗರ ಹುದ್ದೆಯ ನೇರ ನೇಮಕಾತಿ ಸಂಬಂಧ

## ಮಾಹಿತಿ ಸೂಚಿ –2022.

# ಕೊಡಗು ಜಿಲ್ಲೆಯ ಗ್ರಾಮಲೆಕ್ಕಿಗರ ನೇರ ನೇಮಕಾತಿಗೆ ಸಂಬಂಧಿಸಿದಂತೆ ವೇಳಾಪಟ್ಟಿ.

## [Calender of Events]

| ಕ್ರ ಸಂ | ವಿವರ | ದಿನಾಂಕ |
|---|---|---|
| 1 | ಅಧಿಸೂಚನೆ ಹೊರಡಿಸಿದ ದಿನಾಂಕ | 18.04.2022 |
| 2 | ಅರ್ಜಿ ಕರೆಯಲು ನಿಗದಿಪಡಿಸಿದ ದಿನಾಂಕ(ಪ್ರಾರಂಭ ದಿನಾಂಕ) | 19.04.2022 |
| 3 | ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 19.05.2022 |
| 4 | ನಿಗದಿತ ಅರ್ಜಿ ಶುಲ್ಕವನ್ನು ಪಾವತಿಸಲು ನಿಗದಿತ ಕೊನೆಯ ದಿನಾಂಕ | 19.05.2022 |
| 5 | ಜಿಲ್ಲಾಧಿಕಾರಿಗಳು ತಾತ್ಕಾಲಿಕ ಪರಿಶೀಲನಾ ಪಟ್ಟಿಯನ್ನು ಪ್ರಕಟಿಸಬೇಕಾದ ದಿನಾಂಕ(1:5) | 23.05.2022 |
| 6 | ತಾತ್ಕಾಲಿಕ ಪರಿಶೀಲನಾ ಪಟ್ಟಿಗೆ ಆಕ್ಷೇಪಣೆಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ | 31.05.2022 |
| 7 | ತಾತ್ಕಾಲಿಕ ಪರಿಶೀಲನಾ ಪಟ್ಟಿಯಂತೆ ಅಭ್ಯರ್ಥಿಗಳು ಮೂಲ ದಾಖಲಾತಿಗಳೊಂದಿಗೆ ಪರಿಶೀಲನೆಗೆ ಜಿಲ್ಲಾಧಿಕಾರಿಗಳ ಕಛೇರಿಗೆ ಹಾಜರಾಗಬೇಕಾದ ದಿನಾಂಕ ಮತ್ತು ಸಮಯ | 06.06.2022 |
| 8 | ತಾತ್ಕಾಲಿಕ ಆಯ್ಕೆ ಪಟ್ಟಿ ಮತ್ತು ಕಾಯ್ದಿರಿಸಿದ ಆಯ್ಕೆ ಪಟ್ಟಿಗೆ ಆಕ್ಷೇಪಣೆ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕ | 20.06.2022 |
| 9 | ಅಂತಿಮ ಆಯ್ಕೆ ಪಟ್ಟಿ ಪ್ರಕಟಿಸಬೇಕಾದ ದಿನಾಂಕ | 23.06.2022 |
| 10 | ವೆಬ್ ಸೈಟ್ ವಿಳಾಸ | https://kodagu-va.kar.nic.in |
| 11 | ಸ್ಪಷ್ಟೀಕರಣ/ಮಾಹಿತಿಗಾಗಿ ಸಂಪರ್ಕಿಸಬಹುದಾದ ಹೆಲ್ಪ್ ಲೈನ್ | 08272–225811<br>(ಕಛೇರಿ ವೇಳೆ 10:00 AM –5:30 PM) |

18.4.2022

ಜಿಲ್ಲಾಧಿಕಾರಿ,
ಕೊಡಗು ಜಿಲ್ಲೆ, ಮಡಿಕೇರಿ.

## ಅಧ್ಯಕ್ಷರು, ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿಗಳು, ಕೊಡಗು ಜಿಲ್ಲೆ, ಮಡಿಕೇರಿ

## ಅಧಿಸೂಚನೆ

ಸಂಖ್ಯೆ: ಸಿಬ್ಬಂದಿ(1)ಸಿಆರ್/02/2022-23 ದಿನಾಂಕ:18.04.2022.

ಉಲ್ಲೇಖ:(1) ಸರ್ಕಾರದ ಅಧಿಸೂಚನೆ ಸಂಖ್ಯೆ: ಕಂಇ 299 ಬಿಎಸ್‌ಸಿ 2006 ದಿನಾಂಕ:03.02.2009.
(2) ಸರ್ಕಾರದ ಅಧಿಸೂಚನೆ ಸಂಖ್ಯೆ: ಕಂಇ 299 ಬಿಎಸ್‌ಸಿ 2006 ದಿನಾಂಕ:24.07.2009.
(3) ಸರ್ಕಾರದ ಪತ್ರ ಸಂಖ್ಯೆ:ಕಂಇ 04 ಬಿಎಸ್‌ಸಿ 2011, ದಿನಾಂಕ:25-02-2011
(4) ಸರ್ಕಾರದ ಅಧಿಸೂಚನೆ ಸಂ:ಡಿಪಿಎಆರ್/59/ಎಸ್‌ಸಿಆರ್/2012 ದಿನಾಂಕ:07.07.2012.

*****

ಕೊಡಗು ಜಿಲ್ಲಾ ಕಂದಾಯ ಘಟಕದಲ್ಲಿ ಖಾಲಿ ಇರುವ ಗ್ರಾಮ ಲೆಕ್ಕಿಗರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ **Online** ಮುಖಾಂತರ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಅರ್ಜಿ ನಮೂನೆಗಳನ್ನು ಇಲಾಖೆಯ ಅಧಿಕೃತ ವೆಬ್ ಸೈಟ್ ವಿಳಾಸ:**https://kodagu-va.kar.nic.in** ನಲ್ಲಿ ಅಳವಡಿಸಲಾಗಿದೆ. ಅರ್ಜಿಗಳು **ದಿನಾಂಕ:19.04.2022** ರ **ಬೆಳಿಗ್ಗೆ:10.00** ಗಂಟೆಯಿಂದ ಸದರಿ ವೆಬ್ ಸೈಟ್‌ನಲ್ಲಿ ಚಾಲನೆಯಲ್ಲಿರುತ್ತದೆ. ಅರ್ಜಿಗಳನ್ನು ಆನ್-ಲೈನ್ ಮುಖಾಂತರ ಮಾತ್ರ ಸಲ್ಲಿಸತಕ್ಕದ್ದು. ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಸಲ್ಲಿಸಲು ಅವಕಾಶವಿರುವುದಿಲ್ಲ. ಅರ್ಜಿಗಳನ್ನು **ಆನ್‌ಲೈನ್‌ನಲ್ಲಿ ದಿನಾಂಕ:19.05.2022 ರ ಸಂಜೆ:5.30 ರೊಳಗೆ ಸಲ್ಲಿಸತಕ್ಕದ್ದು. ಅರ್ಜಿ ಶುಲ್ಕವನ್ನು ಬ್ಯಾಂಕ್‌ಗೆ ಪಾವತಿ ಮಾಡಲು ಕೊನೆಯ ದಿನಾಂಕ:19.05.2022 ಆಗಿರುತ್ತದೆ.**

| ಹುದ್ದೆಯ ಹೆಸರು | ಒಟ್ಟು ಹುದ್ದೆ | ವಿದ್ಯಾರ್ಹತೆ | ವೇತನ ಶ್ರೇಣಿ |
|---|---|---|---|
| ಗ್ರಾಮ ಲೆಕ್ಕಿಗರು | 35 | ಕರ್ನಾಟಕ ಪದವಿಪೂರ್ವ ಶಿಕ್ಷಣ ಮಂಡಳಿ ನಡೆಸುವ ದ್ವಿತೀಯ ಪಿ.ಯು.ಸಿ ವಿದ್ಯಾರ್ಹತೆ ಅಥವಾ 12ನೇ ತರಗತಿ (12th Standard Examination conducted by Central Board of Secondary Education or ICSE) ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. | 21,400-500-22,400-550-24,600-600-27,000-650-29,600-750-32,650-850-36,000-950-39,800-11,000-42,000 |

**ಖಾಲಿ ಇರುವ ಹೊಸ ಹುದ್ದೆಗಳ ಸಂ:33, ಬ್ಯಾಕ್‌ಲಾಗ್ ಹುದ್ದೆಗಳ ಸಂ: 02, (13-ಸಾಮಾನ್ಯ ಗ್ರಾಮೀಣ), (14-ಸಾಮಾನ್ಯ ಕನ್ನಡ ಮಾಧ್ಯಮ) ಒಟ್ಟು ಖಾಲಿ ಇರುವ ಹುದ್ದೆಗಳ ಸಂ:35**

| ಹುದ್ದೆಯ ಹೆಸರು | ಒಟ್ಟು ಹುದ್ದೆ | ಮೀಸಲಾತಿ ವರ್ಗೀಕರಣ (ರೋಸ್ಟರ್ ಬಿಂದು 43 ರಿಂದ 75 ರವರೆಗೆ) | | | | | | | | |
|---|---|---|---|---|---|---|---|---|---|---|
| | 35 | ಇತರೆ ಅಭ್ಯರ್ಥಿ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂ.ವಿ ಅಭ್ಯರ್ಥಿ | ಮಾ.ಸೈ ಅಭ್ಯರ್ಥಿ | ಕ.ಮಾ.ಅ | ಯೋ.ನಿ.ಅ | ತೃತೀಯ ಲಿಂಗಿಗಳಿಗೆ | ಒಟ್ಟು |
| ಗ್ರಾಮ ಲೆಕ್ಕಿಗರು | ಖಾಲಿ ಇರುವ ಹುದ್ದೆಗಳು | | | | | | | | | |
| | ಪ.ಜಾ | 0 | 01 | 02 | 0 | 0 | 01 | 01 | 0 | 05 |
| | ಪ.ಪಂ | 0 | 0 | 01 | 0 | 0 | 0 | 0 | 0 | 01 |
| | ಪ್ರ-1 | 0 | 0 | 0 | 0 | 0 | 01 | 0 | 0 | 01 |
| | 2ಎ | 01 | 02 | 01 | 0 | 0 | 01 | 0 | 0 | 05 |
| | 2ಬಿ | 0 | 01 | 0 | 0 | 0 | 0 | 0 | 0 | 01 |
| | 3ಎ | 0 | 01 | 01 | 0 | 0 | 0 | 0 | 0 | 02 |
| | 3ಬಿ | 0 | 01 | 0 | 0 | 0 | 01 | 0 | 0 | 02 |
| | ಸಾಮಾನ್ಯ ಅಭ್ಯರ್ಥಿ | 02 | 05 | 05 | 01 (ಚಲನವಲನ ವೈಕಲ್ಯ/ಕುಷ್ಠರೋಗದಿಂದ ಗುಣಮುಖ) | 02 | 01 | 01 | 01 | 18 |
| | **ಒಟ್ಟು** | **03** | **11** | **10** | **01** | **02** | **05** | **02** | **01** | **35** |

ವರ್ಗೀಕರಣ

1) ಮಾ.ಸೈ.ಅಭ್ಯರ್ಥಿ-ಮಾಜಿ ಸೈನಿಕರು
2) ಕ.ಮಾ.ಅ-ಕನ್ನಡ ಮಾಧ್ಯಮ ಅಭ್ಯರ್ಥಿ
3) ಯೋ.ನಿ.ಅ-ಯೋಜನಾ ನಿರಾಶ್ರಿತ ಅಭ್ಯರ್ಥಿ
4) ಅಂ.ವಿ.ಅಭ್ಯರ್ಥಿ-ಅಂಗವಿಕಲ/ವಿಕಲಚೇತನ ಅಭ್ಯರ್ಥಿ
5) ತೃತೀಯ ಲಿಂಗಿಗಳು

ಆನ್ ಲೈನ್ [On line] [ಎಲೆಕ್ಟ್ರಾನಿಕ್ ಮಾರ್ಗ) ಮುಖಾಂತರ ಅರ್ಜಿ ಸಲ್ಲಿಸುವ ವಿಧಾನ:-

ಅಭ್ಯರ್ಥಿಯು ಇಲಾಖೆಯ ಅಧಿಕೃತ ವೆಬ್‌ಸೈಟ್ https://kodagu-va.kar.nic.in ನ್ನು ತೆರದು ಕಂಪ್ಯೂಟರ್ ಪರದೆಯ ಮೇಲೆ ಅರ್ಜಿಯನ್ನು ತುಂಬಬೇಕು ಹಾಗೂ ಇತ್ತೀಚಿನ ಪಾಸ್ ಪೋರ್ಟ್ ಅಳತೆಯ ಭಾವಚಿತ್ರವನ್ನು (jpg/ gif) Browse ಮಾಡಿ Preview ಪರಿಶೀಲಿಸಿ ನಂತರ ಬರುವ Security Code ನಮೂದಿಸಿ Submit Button ಅನ್ನು ಒತ್ತಿದರೆ ಅರ್ಜಿ ಸಂಖ್ಯೆ (Reference Number) ಸೃಷ್ಟಿಯಾಗುತ್ತದೆ. ಆನ್‌ಲೈನ್ ಅರ್ಜಿಯನ್ನು ಭರ್ತಿ ಮಾಡಿದ ನಂತರ ಅಭ್ಯರ್ಥಿಗಳು ಸ್ವೀಕೃತಿ ಪತ್ರ (Acknowledgement Slip) ತೆಗೆದುಕೊಳ್ಳತಕ್ಕದ್ದು. ನಂತರ ಅಭ್ಯರ್ಥಿಯು ಶುಲ್ಕವನ್ನು ಪೇ-ಆನ್‌ಲೈನ್ (Pay Online) ಮೂಲಕ ಎಸ್.ಬಿ.ಐ, ಮಡಿಕೇರಿ ಚಾಲ್ತಿ ಖಾತೆ ಸಂ: 40901632473 ಗೆ ಪಾವತಿಸಬಹುದಾಗಿದೆ.

ಶುಲ್ಕವನ್ನು ಆನ್ ಲೈನ್ ಮೂಲಕ ಪಾವತಿ ಮಾಡಲಾಗದಿದ್ದಲ್ಲಿ ಅಭ್ಯರ್ಥಿಯು ಆನ್‌ಲೈನ್‌ನಿಂದಲೇ ಚಲನ್ ಪ್ರತಿಯನ್ನು ಮುದ್ರಿಸಿ ನಗದು ಕೂಡಾ ಯಾವುದೇ ಎಸ್.ಬಿ.ಐ ಶಾಖೆಯಲ್ಲಿ ಬ್ಯಾಂಕ್ ಶುಲ್ಕದೊಂದಿಗೆ ಪಾವತಿಸಬಹುದು. ಶುಲ್ಕ ಪಾವತಿಸಲು ಕೊನೆಯ ದಿನಾಂಕ:19-05-2022 ಆಗಿರುತ್ತದೆ.

ಅಭ್ಯರ್ಥಿಯು ಸ್ವೀಕೃತಿ ಪತ್ರ ಹಾಗೂ ಚಲನ್ ಪ್ರತಿಯನ್ನು (ನಗದಾಗಿ ಪಾವತಿ ಮಾಡಿದ್ದಲ್ಲಿ ಮಾತ್ರ) ಸಂದರ್ಶನದ ದಿನಾಂಕದವರೆಗೆ ತಮ್ಮ ಬಳಿ ಕಾಯ್ದಿರಿಸಿಕೊಳ್ಳಬೇಕು ಹಾಗೂ ಯಾವುದೇ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳ ಕಛೇರಿಯಿಂದ ಈ ಬಗ್ಗೆ ಮಾಹಿತಿ ಕೇಳಿದಾಗ ಹಾಜರುಪಡಿಸತಕ್ಕದ್ದು.

ಡಿ.ಡಿ/ಪೋಸ್ಟಲ್ ಆರ್ಡರ್/ಮನಿ ಆರ್ಡರ್ ಇವುಗಳನ್ನು ಅಥವಾ ನಗದಾಗಿ ಸ್ವೀಕರಿಸಲಾಗುವುದಿಲ್ಲ. ಸಲ್ಲಿಸಿರುವ ಅರ್ಜಿ ಶುಲ್ಕವನ್ನು ಯಾವುದೇ ಕಾರಣಕ್ಕೂ ಹಿಂದಿರುಗಿಸಲಾಗುವುದಿಲ್ಲ ಅಥವಾ ಬೇರೆ ಯಾವುದೇ ಇತರೆ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ದಿನಾಂಕದೊಳಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸತಕ್ಕದ್ದು.

ಅರ್ಜಿ ಶುಲ್ಕ

| | |
|---|---|
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ -1 ರ ಅಭ್ಯರ್ಥಿಗಳಿಗೆ : | ರೂ 200-00 |
| ಸಾಮಾನ್ಯ ವರ್ಗ, 2ಎ, 2ಬಿ, 3ಎ, 3ಬಿ ವರ್ಗದ ಅಭ್ಯರ್ಥಿಗಳಿಗೆ : | ರೂ 400-00 |

ಅಭ್ಯರ್ಥಿಗಳಿಗೆ ಸೂಚನೆ ಮತ್ತು ಷರತ್ತುಗಳು :

1. ಅರ್ಜಿಗಳನ್ನು ಆನ್‌ಲೈನ್ ಮೂಲಕ ಮಾತ್ರ ಸಲ್ಲಿಸತಕ್ಕದ್ದು. ಅಂಚೆ ಅಥವಾ ಕೊರಿಯರ್ ಅಥವಾ ಖುದ್ದಾಗಿ ಸ್ವೀಕರಿಸಲಾಗುವುದಿಲ್ಲ/ಪರಿಗಣಿಸಲಾಗುವುದಿಲ್ಲ.
2. **ವಯೋಮಿತಿ**: ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವಾದ 19-05-2022 ರಂದು ಕೆಳಕಂಡ ವಯೋಮಿತಿ ಹೊಂದಿರತಕ್ಕದ್ದು.

| ವರ್ಗ | ಕನಿಷ್ಠ | ಗರಿಷ್ಠ |
|---|---|---|
| ಪ.ಜಾ/ಪ.ಪಂ/ಪ್ರವರ್ಗ-1 : | 18 ವರ್ಷ | 40 ವರ್ಷ |
| ಹಿಂದುಳಿದ ವರ್ಗ:(2ಎ,2ಬಿ, 3ಎ, 3ಬಿ) | 18 ವರ್ಷ | 38 ವರ್ಷ |
| ಸಾಮಾನ್ಯ ವರ್ಗ: | 18 ವರ್ಷ | 35 ವರ್ಷ |

ಕರ್ನಾಟಕ ಸರ್ಕಾರಿ ಸೇವಾ [ಸಾಮಾನ್ಯ ನೇಮಕಾತಿ] 1977 ರ ನಿಯಮಾವಳಿಗಳ ನಿಯಮ (6) ರಂತೆ ಗರಿಷ್ಠ ವಯೋಮಿತಿಯನ್ನು ಈ ಮುಂದಿನ ಪ್ರಕರಣಗಳಲ್ಲಿ ಮುಂದೆ ಹೇಳಿರುವಷ್ಟರಮಟ್ಟಿಗೆ ಹೆಚ್ಚಿಸಲು ಅವಕಾಶವಿದೆ.

ಅ) ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ ಅವನು/ಅವಳು ಕೇಂದ್ರ ಸಶಸ್ತ್ರ ಪಡೆಗಳಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವರೋ ಅಷ್ಟು ವರ್ಷಗಳಿಗೆ 3 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು.

ಆ) ಅಭ್ಯರ್ಥಿಯು ವಿಕಲಚೇತನರಾಗಿದ್ದಲ್ಲಿ 10 ವರ್ಷಗಳು

ಇ) ಅಭ್ಯರ್ಥಿಯು ವಿಧವೆಯಾಗಿದ್ದಲ್ಲಿ 10 ವರ್ಷಗಳು

3. ನಿಗದಿತ ದಿನಾಂಕದ ನಂತರ ಹಾಕಿದ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.
4. ಅಭ್ಯರ್ಥಿಗಳ ಆಯ್ಕೆ ಬಗ್ಗೆ ಪ್ರಚಾರ ಅಥವಾ ಶಿಫಾರಸ್ಸುಗಳನ್ನು ಮಾಡಿದರೆ ಅಂಥವರ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
5. ಅರ್ಜಿದಾರರೊಡನೆ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.
6. ಮೀಸಲಾತಿ ಅಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಜಾತಿ ಪ್ರಮಾಣ ಪತ್ರದ ಬಗ್ಗೆ ಜಿಲ್ಲಾಧಿಕಾರಿಗಳು (ಅಧ್ಯಕ್ಷರು, ಜಿಲ್ಲಾ ಜಾತಿ ಪರಿಶೀಲನಾ ಸಮಿತಿ) ಸಿಂಧುತ್ವ ಪ್ರಮಾಣ ಪತ್ರವನ್ನು (ಇ-ಸಿಂಧುತ್ವ) ಸೇವಾಸಿಂಧು ಯೋಜನೆಯಡಿ ಪಡೆದ ನಂತರ ನೇಮಕಾತಿ ಆದೇಶ ನೀಡಲಾಗುವುದು.
7. ನೇಮಕಾತಿ ಬಗ್ಗೆ ಅಂತಿಮ ತೀರ್ಮಾನವನ್ನು ನೇಮಕಾತಿ ಪ್ರಾಧಿಕಾರಿಯಾದ ಜಿಲ್ಲಾಧಿಕಾರಿಗಳು, ಕೊಡಗು ಜಿಲ್ಲೆ ರವರು ಕಾಯ್ದಿರಿಸಿಕೊಂಡಿರುತ್ತಾರೆ.
8. ಆಯ್ಕೆಯನ್ನು ಅಭ್ಯರ್ಥಿಯ ***ಮೆರಿಟ್*** ಆಧಾರದ ಮೇಲೆ ಮಾತ್ರ ಪರಿಗಣಿಸಲಾಗುವುದು.
9. **ಜಾತಿ / ಮೀಸಲಾತಿ ಕೋರ ಬಯಸುವ ಅಭ್ಯರ್ಥಿಗಳು :**

ಮೀಸಲಾತಿ ಸೌಲಭ್ಯ ಅಪೇಕ್ಷಿಸುವ ಅಭ್ಯರ್ಥಿಗಳು ಈ ಕೆಳಕಂಡ ಮೂಲ ದಾಖಲೆಗಳನ್ನು ನಿಗದಿತ ನಮೂನೆಯಲ್ಲಿ ಸಂಬಂಧಪಟ್ಟ ಕಂದಾಯ ಪ್ರಾಧಿಕಾರದಿಂದ (ಸಂಬಂಧಪಟ್ಟ ತಹಸೀಲ್ದಾರ್‌ರಿಂದ) ಪ್ರಮಾಣಪತ್ರ ಪಡೆದು ದಾಖಲಾತಿ ಪರಿಶೀಲನಾ ಸಮಯದಲ್ಲಿ ಹಾಜರುಪಡಿಸಬೇಕು. ತಪ್ಪಿದ್ದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ಪರಿಗಣಿಸಲಾಗುವುದಿಲ್ಲ. (ಪ್ರಮಾಣಪತ್ರವು ಅಧಿಸೂಚನೆಯಾದ ದಿನಾಂಕದಿಂದ 05 ವರ್ಷದ ಒಳಗಡೆ ಇರತಕ್ಕದ್ದು.)

| | |
|---|---|
| ಪ.ಜಾ / ಪ.ಪಂ. | ನಮೂನೆ- ಡಿ |
| ಪ್ರವರ್ಗ -1 | ನಮೂನೆ- ಇ |
| ಪ್ರವರ್ಗ 2ಎ, 2ಬಿ, 3ಎ, 3ಬಿ | ನಮೂನೆ- ಎಫ್ |

**10. ಯೋಜನೆ ನಿರಾಶ್ರಿತ ಅಭ್ಯರ್ಥಿಗಳು:**

ಯೋಜನೆಗಳಿಂದ ನಿರ್ವಸಿತರಾದ ಕುಟುಂಬಗಳಿಗೆ ಮೀಸಲಿರಿಸಿದ ಹುದ್ದೆಗಳನ್ನು ಮೀಸಲಾತಿ ಕೋರುವ ಅಭ್ಯರ್ಥಿಗಳು ಸರ್ಕಾರದ ಆದೇಶ ಸಂಖ್ಯೆ:ಡಿಪಿಎಆರ್/44/ಸೆನೆನಿ/2001 ದಿನಾಂಕ:27-07-2001 ರಲ್ಲಿ ಸೂಚಿಸಿರುವಂತೆ ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರವನ್ನು (ಯೋಜನೆಗಳಿಂದ ನಿರ್ವಸಿತರಾದ ಕುಟುಂಬದ ಅಭ್ಯರ್ಥಿ) ಸಲ್ಲಿಸತಕ್ಕದ್ದು.

11. **ಅಂಗವಿಕಲ/ವಿಕಲ ಚೇತನ ಅಭ್ಯರ್ಥಿಗಳು :**

ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ 9(1-ಎ) ರನ್ವಯ ರಾಜ್ಯ ಸಿವಿಲ್ ಸೇವೆಯಲ್ಲಿನ ಗ್ರೂಫ್-ಸಿ ಹುದ್ದೆಗಳ ನೇರ ನೇಮಕಾತಿಯಲ್ಲಿ ಅಂಗವಿಕಲರಿಗೆ ಶೇ.5 ರಷ್ಟು ಸಮತಳ ಮೀಸಲಾತಿ ಕಲ್ಪಿಸಲಾಗಿದೆ. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ/128/ಸೆನೆನಿ/2006, ದಿನಾಂಕ:01-08-2009ರಂತೆ ಹಾಗೂ ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ/149/ಎಸ್‌ಆರ್‌ಆರ್/2020, ದಿನಾಂಕ:25-09-2020 ಮತ್ತು 18-02-2021 ರಂತೆ ಮೀಸಲಾತಿ ನೀಡಲಾಗುವುದು,

ಪ್ರಸ್ತುತ ಅಧಿಸೂಚನೆಯಲ್ಲಿ ನಮೂದಿಸಿದ 20 ಬಿಂದುಗಳ ರೋಸ್ಟರ್‌ನಲ್ಲಿ ಕ್ರಮ ಸಂಖ್ಯೆ: 24ರ ಒಂದು (1) ಅಂಗವಿಕಲ ಹುದ್ದೆಯನ್ನು **Locomotor disability including cerebral palsy, leprosy cured, dwarfism acid attack victims and muscular dystrophy (ಚಲನವಲನ ವೈಕಲ್ಯ/ಕುಷ್ಠ ರೋಗದಿಂದ ಗುಣಮುಖ/**

ಆಸಿಡ್ ದಾಳಿಗೆ ಒಳಗಾದವರು) ವೈಕಲ್ಯತೆಯ ಸ್ವರೂಪದ ಅಭ್ಯರ್ಥಿಗಳಿಗೆ ನಿಗದಿಪಡಿಸಿರುವುದಾಗಿದೆ. ಆದರೆ ಸರ್ಕಾರದ ಅಧಿಸೂಚನೆ ಸಂ:ಡಿಪಿಎಆರ್/52/ಎಸ್.ಎಸ್.ಆರ್/99 ದಿನಾಂಕ:29.11.2002 ಮತ್ತು ಸರ್ಕಾರದ ಅಧಿಸೂಚನೆ ಸಂ:ಡಿಪಿಎಆರ್/54/ಎಸ್.ಆರ್.ಆರ್/2012 ದಿನಾಂಕ:23.06.2012 ರೀತ್ಯಾ ಗ್ರಾಮಲೆಕ್ಕಿಗರ ಹುದ್ದೆಗಳಲ್ಲಿ ಅಂಗವಿಕಲರ ಮೀಸಲಾತಿಯನ್ನು ಈ ಕೆಳಕಂಡ ವರ್ಗಗಳಿಗೆ ಮಾತ್ರ ಕಲ್ಪಿಸಲಾಗಿದೆ.

1. ಕುಷ್ಠರೋಗದಿಂದ ಗುಣಮುಖರಾದವರು [ **Leprosy cured** ]
2. ದೈಹಿಕ ಅಂಗವಿಕಲತೆ ಉಳ್ಳವರು [ **Locomotor disability** ]

**ಈ ಮೇಲಿನ ವಿಕಲಚೇತನರನ್ನು ಹೊರತುಪಡಿಸಿ ಇತರೆ ದೈಹಿಕ ಅಂಗವಿಕಲತೆವುಳ್ಳ ಅಭ್ಯರ್ಥಿಗಳು ಗ್ರಾಮಲೆಕ್ಕಿಗರ ಹುದ್ದೆಗೆ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.**

ಸರ್ಕಾರದ ಅಧಿಕೃತ ಜ್ಞಾಪನ ಸಂ:ಸಿಆಸುಇ 128 ಸೆನೆನಿ 2005 ದಿನಾಂಕ:19-11-2005 ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಸಂಬಂಧಪಟ್ಟ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯು ನೀಡುವ ಪ್ರಮಾಣ ಪತ್ರವನ್ನು ಪಡೆದುಕೊಂಡಿರತಕ್ಕದ್ದು. ಬೇರೆ ಯಾವುದೇ ನಮೂನೆಗಳಲ್ಲಿ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ.

**12. ಗ್ರಾಮೀಣ ಅಭ್ಯರ್ಥಿಗಳು :**

ಗ್ರಾಮೀಣ ಅಭ್ಯರ್ಥಿ ಎಂದರೆ, ಒಂದು ಹುದ್ದೆಗಾಗಿ ನಿಯಮಿಸಲಾದ ಅರ್ಹತಾ ಪರೀಕ್ಷೆಯು ಎಸ್.ಎಸ್.ಎಲ್.ಸಿ ಅಥವಾ ಉನ್ನತ ಪರೀಕ್ಷೆಯಾಗಿದ್ದಲ್ಲಿ 1ನೇ ತರಗತಿಯಿಂದ 10 ನೇ ತರಗತಿಯವರೆಗೆ ವ್ಯಾಸಂಗದ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಪ್ರಾಧಿಕಾರಿಯಿಂದ ದೃಢೀಕೃತ ಗ್ರಾಮೀಣ ಧೃಡೀಕರಣ ಪತ್ರವನ್ನು ಪಡೆದಿರಬೇಕು ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು ಗ್ರಾಮೀಣ ಅಭ್ಯರ್ಥಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮು ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು **ನಮೂನೆ-2ರ** ಪ್ರಮಾಣ ಪತ್ರವಲ್ಲದೇ ಮೇಲುಸ್ಥರಕ್ಕೆ ಸೇರಿಲ್ಲದಿರುವ ಬಗ್ಗೆ **ನಮೂನೆ-1 ರಲ್ಲಿ** ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಪಟ್ಟ ತಹಸೀಲ್ದಾರ್ ರವರಿಂದ ಪಡೆದಿರಬೇಕು. ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಠ ಜಾತಿ, ಪರಿಶಿಷ್ಠ ಪಂಗಡ, ಪ್ರವರ್ಗ-1, ಪ್ರವರ್ಗ -2ಎ, 2ಬಿ, 3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ-2ರಲ್ಲಿ ನಿಗದಿತ ಪ್ರಾಧಿಕಾರಿಗಳಿಂದ ಪಡೆದು **ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಪಡೆದಿರತಕ್ಕದ್ದು.** ಈ ಪ್ರಮಾಣ ಪತ್ರವನ್ನು ಈ ಹುದ್ದೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ:19-05-2022 ರ ಒಳಗೆ ಪಡೆದಿರತಕ್ಕದ್ದು.

**13. ಕನ್ನಡ ಮಾಧ್ಯಮ ಅಭ್ಯರ್ಥಿಗಳು.**

ಸರ್ಕಾರದ ಅಧಿಸೂಚನೆ ಸಂ: ಡಿಪಿಎಆರ್ 71 ಎಸ್ ಆರ್ ಆರ್ 2001 ದಿ:24.10.2002 ರಲ್ಲಿ ಹೊರಡಿಸಿರುವ ಕರ್ನಾಟಕ ಸರ್ಕಾರಿ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977 ರ ನಿಯಮ (9) (1) (ಸಿ) ರನ್ವಯ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಮೊಹರು ಮಾಡಿದ ಪ್ರಮಾಣ ಪತ್ರವನ್ನು ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಪಡೆದಿರತಕ್ಕದ್ದು. ಈ ಪ್ರಮಾಣ ಪತ್ರವನ್ನು ಈ ಹುದ್ದೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ:19-05-2022ರ ಒಳಗೆ ಪಡೆದಿರತಕ್ಕದ್ದು.

**14. ಅರ್ಹತಾ ಷರತ್ತುಗಳು :**

ಅ) ಭಾರತೀಯ ನಾಗರೀಕನಾಗಿರತಕ್ಕದ್ದು.

ಆ) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟುಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನ್ಯತೆಯಿಂದ ಮುಕ್ತರಾಗಿರಬೇಕು.

ಇ) ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ಆಯ್ಕೆ ಪ್ರಾಧಿಕಾರ/ರಾಜ್ಯ ಸರ್ಕಾರ ಕಾಯ್ದಿರಿಸಿಕೊಂಡಿದೆ ಮತ್ತು ಆಯ್ಕೆ ಪ್ರಾಧಿಕಾರದ ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ. ನಿಗಧಿತ ಶೈಕ್ಷಣಿಕ ಅರ್ಹತೆ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಹೊಂದಿರಬೇಕು.

ಈ) ಕರ್ನಾಟಕ ನಾಗರೀಕ ಸೇವೆ (ಕಂಪ್ಯೂಟರ್ ಲಿಟರಸಿ ಟೆಸ್ಟ್) ನಿಯಮಗಳು 2012 ರ ನಿಯಮ 2ರಲ್ಲಿ ನಿಗದಿಪಡಿಸಿರುವಂತೆ ಹುದ್ದೆಗೆ ಆಯ್ಕೆಗೊಂಡ ಅಭ್ಯರ್ಥಿಗಳು ಸರ್ಕಾರದವರು ನಡೆಸುವ ಅಥವಾ ಸರಕಾರದ ಅನುಮೋದಿತ ಏಜೆನ್ಸಿಯವರು ತೆಗದುಕೊಳ್ಳುವ ಕಂಪ್ಯೂಟರ್ ಲಿಟರಸಿ ಟೆಸ್ಟ್ (Computer Literacy Test) ನಲ್ಲಿ ಕನಿಷ್ಠ ಶೇ.75 ಕ್ಕಿಂತ ಕಡಿಮೆ ಇಲ್ಲದಷ್ಟು ಅಂಕ ಪಡೆದು ಉತ್ತೀರ್ಣರಾದ ಬಗ್ಗೆ ಪ್ರಮಾಣ ಪತ್ರವನ್ನು ಮೂರು ತಿಂಗಳ ಅವಧಿಯೊಳಗಾಗಿ ಹಾಜರುಪಡಿಸತಕ್ಕದ್ದು.

**15. ಕೆಳಕಂಡ ಮೂಲ ದಾಖಲೆಗಳನ್ನು ದಾಖಲಾತಿಗಳ ಪರಿಶೀಲನೆಯ ಸಮಯದಲ್ಲಿ ಹಾಜರುಪಡಿಸಬೇಕು.**

- ಹುದ್ದೆಗಳಿಗೆ ನಿಗದಿಪಡಿಸಲಾದ ವಿದ್ಯಾರ್ಹತೆಯ ಅಂಕಪಟ್ಟಿ / ಪ್ರಮಾಣ ಪತ್ರ.
- ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ /ವರ್ಗಾವಣೆ ಪ್ರಮಾಣ ಪತ್ರ / ಜನ್ಮ ದಿನಾಂಕವನ್ನು ತೋರಿಸುವ ಶೈಕ್ಷಣಿಕ ಸಂಚಿತ ದಾಖಲೆಯ ಉಧೃತ ಭಾಗ.
- ಸೈನಿಕ ಸೇವೆಯಿಂದ ಬಿಡುಗಡೆಯಾದ / ಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ)
- ಪರಿಶಿಷ್ಠ ಜಾತಿ / ಪರಿಶಿಷ್ಠ ಪಂಗಡ, ಪ್ರವರ್ಗ–1, ಪ್ರವರ್ಗ –2ಎ, ಪ್ರವರ್ಗ –2ಬಿ, ಪ್ರವರ್ಗ– 3ಎ, 3ಬಿ ಗಳ ಪ್ರಮಾಣ ಪತ್ರಗಳು (ಮೀಸಲಾತಿ ಕೋರಿದ್ದಲ್ಲಿ).
- ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ–1 ಮತ್ತು 2 ರಲ್ಲಿ (ಮೀಸಲಾತಿ ಕೋರಿದ್ದಲ್ಲಿ).
- ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ).
- ಅಂಗವಿಕಲ ಮೀಸಲಾತಿ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ).
- ಯೋಜನೆಗಳಿಂದ ನಿರಾಶ್ರಿತರಾದ ಬಗ್ಗೆ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ).
- ವಿಧವೆಯಾದಲ್ಲಿ ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ.

ಮೇಲ್ಕಂಡಂತೆ ನಿಗದಿಪಡಿಸಿದ ಎಲ್ಲಾ ದಾಖಲೆಗಳನ್ನು ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಮಾತ್ರ ದಾಖಲಾತಿಗಳ ಪರಿಶೀಲನೆಯ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

**16. <u>ಇತರೆ ಸೂಚನೆಗಳು :–</u>**

1. ಅರ್ಜಿಯಲ್ಲಿ ತಪ್ಪು/ಸುಳ್ಳು ಮಾಹಿತಿ ನೀಡಿ ಉದ್ಯೋಗ ಪಡೆಯುವ ಅಭ್ಯರ್ಥಿಗಳ ನೇಮಕಾತಿಯನ್ನು ವಜಾಗೊಳಿಸುವುದಲ್ಲದೆ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು.
2. ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೇ ದಿನವು ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕವಾಗುವುದು.
3. ಅರ್ಜಿಯಲ್ಲಿ ನೀಡುವ ವಿಳಾಸವೇ ಅಂತಿಮವಾಗಿದ್ದು ಎಲ್ಲಾ ಪತ್ರ ವ್ಯವಹಾರಗಳನ್ನು ಅದೇ ವಿಳಾಸಕ್ಕೆ ಕಳುಹಿಸಿ ಕೊಡಲಾಗುವುದು. ನಂತರದಲ್ಲಿ ವಿಳಾಸ ಬದಲಾವಣೆ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಪರಿಗಣಿಸಲಾಗುವುದಿಲ್ಲ.
4. ಅರ್ಹ ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವ ಮುನ್ನ ವೆಬ್ ಸೈಟ್‌ನಲ್ಲಿ ತಿಳಿಸಿರುವ ಸೂಚನೆಗಳನ್ನು ಪಾಲಿಸುವುದು.
5. ಅಭ್ಯರ್ಥಿಯ ಹೆಸರು ಅಂತಿಮ ಆಯ್ಕೆ ಪಟ್ಟಿಯಲ್ಲಿ ಸೇರ್ಪಡೆಯಾಗಿದೆ ಎಂಬುದರ ಆಧಾರದ ಮೇಲೆ ಅಭ್ಯರ್ಥಿಗೆ ನೇಮಕಾತಿಯ ಹಕ್ಕು ದೊರೆಯುವುದಿಲ್ಲ.
6. ಅಭ್ಯರ್ಥಿಗಳ ಅರ್ಹತೆಯ ವಿಷಯದಲ್ಲಿ ಆಯ್ಕೆ ಪ್ರಾಧಿಕಾರದ ನಿರ್ಧಾರವೇ ಅಂತಿಮವಾಗಿರುತ್ತದೆ.

7. ಆಯ್ಕೆ ಸಂಬಂಧವಾಗಿ ಈ ಕಛೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರಕ್ಕೆ ಆಸ್ಪದವಿರುವುದಿಲ್ಲ.
8. ಅರ್ಜಿ ಸಲ್ಲಿಸುವಾಗ ಅಭ್ಯರ್ಥಿಗಳು ದೂರವಾಣಿ/ಮೊಬೈಲ್ ಸಂಖ್ಯೆಯನ್ನು ಕಡ್ಡಾಯವಾಗಿ, ನಮೂದಿಸತಕ್ಕದ್ದು.
9. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಈ ಕೆಳಕಂಡಂತೆ ಸಂಪರ್ಕಿಸತಕ್ಕದ್ದು.

    1) ಇ-ಮೇಲ್ : deo.kodagu@gmail.com
    2) ದೂರವಾಣಿ : 08272-225811
    3) ಫ್ಯಾಕ್ಸ್ ನಂ : 08272-225900

18.4.2017

(ಡಾ. ಬಿ.ಸಿ.ಸತೀಶ, ಭಾ.ಆ.ಸೇ)
ಅಧ್ಯಕ್ಷರು,
ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ ಹಾಗೂ
ಜಿಲ್ಲಾಧಿಕಾರಿಗಳು, ಕೊಡಗು ಜಿಲ್ಲೆ, ಮಡಿಕೇರಿ.

<u>ಪ್ರತಿಯನ್ನು:-</u>

1. ಸಂಕಲನಕಾರರು, ಸರಕಾರಿ ಹೊರವಲಯ ಮುದ್ರಣಾಲಯ, ಆರ್.ವಿ.ಕಾಲೇಜ್ ಅಂಚೆ, 8ನೇ ಮೈನ್, ಮೈಸೂರು ರಸ್ತೆ, ಕೆಂಗೇರಿ, ಬೆಂಗಳೂರು-560059 ಕರ್ನಾಟಕ ರಾಜ್ಯ ಪತ್ರ ಬೆಂಗಳೂರು ಇವರಿಗೆ ಕಳುಹಿಸುತ್ತಾ, ಈ ಅಧಿಸೂಚನೆಯನ್ನು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಹಾಗೂ 100 ಪ್ರತಿಗಳನ್ನು ಜಿಲ್ಲಾಧಿಕಾರಿಗಳು, ಕೊಡಗು ಜಿಲ್ಲೆ, ಮಡಿಕೇರಿ ರವರಿಗೆ ಒದಗಿಸಲು ಕೋರಿದೆ.
2. ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ರವರ ಅವಗಾಹನೆಗೆ ಸಲ್ಲಿಸಿದೆ.
3. ಸರ್ಕಾರದ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಬೆಂಗಳೂರು ರವರ ಅವಗಾಹನೆಗೆ ಸಲ್ಲಿಸಿದೆ.
4. ಮಹಾಲೇಖಪಾಲರು (ಎ ಮತ್ತು ಇ) ಕರ್ನಾಟಕ, ಬೆಂಗಳೂರು ರವರಿಗೆ ಸಲ್ಲಿಸಿದೆ.
5. ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ ಮೈಸೂರು ರವರ ಅವಗಾಹನೆಗೆ ಸಲ್ಲಿಸಿದೆ.
6. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು – ತಮ್ಮ ಕಛೇರಿಯ ಮಾಹಿತಿ ಫಲಕದಲ್ಲಿ ಪ್ರಚುರ ಪಡಿಸಲು ಕೋರಿದೆ.
7. ಜಿಲ್ಲಾ ಉದ್ಯೋಗ ವಿನಿಮಯ ಅಧಿಕಾರಿ, ಮಡಿಕೇರಿ
8. ಪ್ರಾಂಶುಪಾಲರು, ಜಿಲ್ಲಾ ತರಬೇತಿ ಸಂಸ್ಥೆ, ಮಡಿಕೇರಿ
9. ಉಪನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಮಡಿಕೇರಿ.
10. ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಇಲಾಖೆ, ಮಡಿಕೇರಿ
11. ಜಿಲ್ಲಾ ಅಧಿಕಾರಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಮಡಿಕೇರಿ.
12. ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಮಡಿಕೇರಿ
13. ಯೋಜನಾ ನಿರ್ದೇಶಕರು, ಸಮಗ್ರ ಗಿರಿಜನ ಅಭಿವೃದ್ಧಿ ಯೋಜನಾ ಇಲಾಖೆ, ಕೊಡಗು ಜಿಲ್ಲೆ, ಮಡಿಕೇರಿ.
14. ಉಪವಿಭಾಗಾಧಿಕಾರಿಗಳು, ಮಡಿಕೇರಿ ಉಪವಿಭಾಗ ಇವರಿಗೆ ಕಳುಹಿಸುತ್ತಾ, ನಿಮ್ಮ ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ತಿಳಿಸಿದೆ.
15. ಜಿಲ್ಲೆಯ ಎಲ್ಲಾ ತಹಶೀಲ್ದಾರರುಗಳಿಗೆ ಕಳುಹಿಸುತ್ತಾ, ನಿಮ್ಮ ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ತಿಳಿಸಿದೆ.
16. ಈ ಕಾರ್ಯಾಲಯದ ಸೂಚನಾ ಫಲಕಕ್ಕೆ
17. ಹೆಚ್ಚುವರಿ ಪ್ರತಿಗಳು ಶಾಖಾ ಕಡತಕ್ಕೆ